ಆ) ಹಾಗಿದ್ದಲ್ಲಿ, ಅವುಗಳನ್ನು ಎಂದಿನಿಂದ ಮಂಜೂರು ಮಾಡಲಾಗುವುದು;

ಇ) ಸದರಿ ಪ್ರೌಢಶಾಲೆಗಳು ಮತ್ತು ಪದವಿ ಪೂರ್ವ ಕಾಲೇಜುಗಳಿಗೆ ನಿಗದಿಯಾದ ಅನುದಾನದ ಮೊತ್ತ ಎಷ್ಟು (ಜಿಲ್ಲಾವಾರು ಹಾಗೂ ತಾಲ್ಲೂಕುವಾರು ವಿವರ ನೀಡುವುದು)?

ಶ್ರೀ ಕಾಗೇರಿ ವಿಶ್ವೇಶ್ವರ ಹೆಗಡೆ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

1161 ಶ್ರೀ ರಹೀಮ್ ಖಾನ್ (ಬೀದರ್) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೀದರ್ ವಿಧಾನಸಭಾ ಕ್ಷೇತ್ರದಲ್ಲಿರುವ ಉರ್ದು ಶಾಲೆಗಳ ಸಂಖ್ಯೆ ಎಷ್ಟು;

ಆ) ಸದರಿ ವಿಧಾನ ಸಭಾ ಕ್ಷೇತ್ರದಲ್ಲಿನ ಅಲ್ಪಸಂಖ್ಯಾತರ ಮಕ್ಕಳ ವಿದ್ಯಾಭ್ಯಾಸಕ್ಕಾಗುವಷ್ಟು ಶಾಲೆಗಳನ್ನು ತೆರೆಯಲಾಗಿದೆಯೇ; ಇಲ್ಲವಾದಲ್ಲಿ ಇದಕ್ಕೆ ಕಾರಣಗಳೇನು;

ಇ) ಸದರಿ ವಿಧಾನ ಸಭಾಕ್ಷೇತ್ರಕ್ಕೆ ಇನ್ನೂ 4 ಉರ್ದು ಶಾಲೆಗಳ ಅವಶ್ಯಕವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಬಂದಿದ್ದಲ್ಲಿ, ಪ್ರಸಕ್ತ ಸಾಲಿನಲ್ಲಿ ಎಷ್ಟು ಉರ್ದು ಶಾಲೆಗಳಿಗೆ ಮಂಜೂರಾತಿ ನೀಡಲಾಗುವುದು (ವಿವರ ನೀಡುವುದು)?

ಶ್ರೀ ಕಾಗೇರಿ ವಿಶ್ವೇಶ್ವರ ಹೆಗಡೆ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ) ಬೀದರ್ ವಿಧಾನಸಭಾ ಕ್ಷೇತ್ರದಲ್ಲಿ ಉರ್ದು ಪ್ರಾಥಮಿಕ ಶಾಲೆಗಳ ಸಂಖ್ಯೆ ಒಟ್ಟು 78. ಪ್ರೌಢಶಾಲೆಗಳ ಸಂಖ್ಯೆ ಒಟ್ಟು 13.

ಆ) ತೆರೆಯಲಾಗಿದೆ.

ಉದ್ಭವಿಸುವುದಿಲ್ಲ.

ಇ) ಹೌದು.

ಈ) ಪ್ರಸಕ್ತ ಸಾಲಿಗೆ ಬೀದರ್ ತಾಲ್ಲೂಕಿನ ಕೋಲಾರ (ಬಿ), ಶೇಕಾಮರ, ಮತ್ತು ಬರಿದಾಬಾದ್ ಗ್ರಾಮಗಳಲ್ಲಿ ಉರ್ದು ಪ್ರಾಥಮಿಕ ಶಾಲೆಗಳಿಗೆ ಮಂಜೂರಾತಿ ನೀಡಲಾಗಿದೆ.

1144 ಶ್ರೀ ಶಿವಲಿಂಗೇಗೌಡ ಕೆ.ಎಂ. ಹಾಗೂ ಶ್ರೀ ಬಚ್ಚೇಗೌಡ ಕೆ.ಪಿ. : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿರುವ ಸರ್ಕಾರಿ ಕಾನೂನು ಕಾಲೇಜುಗಳ ಸಂಖ್ಯೆ ಎಷ್ಟು (ಜಿಲ್ಲಾವಾರು, ಕಾಲೇಜುವಾರು ಮಾಹಿತಿ ನೀಡುವುದು);

ಆ) ಈ ಕಾಲೇಜುಗಳನ್ನು ಯಾವ ಯಾವ ವರ್ಷದಲ್ಲಿ ಮಂಜೂರು ಮಾಡಲಾಗಿದೆ ಹಾಗೂ ಕಳೆದ ಮೂರು ವರ್ಷಗಳಿಂದ ಮಂಜೂರಾದ ಸರ್ಕಾರಿ ಕಾಲೇಜುಗಳ ಸಂಖ್ಯೆ ಎಷ್ಟು (ಜಿಲ್ಲಾವಾರು ಹಾಗೂ ಕಾಲೇಜುವಾರು ಮಾಹಿತಿ ನೀಡುವುದು);

ಇ) ಪ್ರಸಕ್ತ ಸಾಲಿನಲ್ಲಿ ಬೇರೆ ಕಡೆಗೆ ವರ್ಗಾಯಿಸಲಾದ ಕಾನೂನು ಕಾಲೇಜುಗಳ ಸಂಖ್ಯೆ ಎಷ್ಟು ಹಾಗೂ ವರ್ಗಾವಣೆ ಮಾಡಲು ಕಾರಣಗಳೇನು (ಮಾಹಿತಿ ನೀಡುವುದು);

ಈ) ಸರ್ಕಾರಿ ಕಾನೂನು ಕಾಲೇಜುಗಳಲ್ಲಿ ವ್ಯಾಸಂಗ ಮಾಡಲು ಅವಕಾಶವಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು (ಕಾಲೇಜುವಾರು ಮಾಹಿತಿ ನೀಡುವುದು);

ಉ) ಕಳೆದ ಮೂರು ವರ್ಷಗಳಲ್ಲಿ ಮಂಜೂರಾದ ಕಾನೂನು ಕಾಲೇಜುಗಳಿಗೆ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲಾಗಿದೆಯೇ; ಹಾಗಿಲ್ಲದಿದ್ದಲ್ಲಿ, ಕಾರಣಗಳೇನು;

ಊ) ಈಗಿರುವ ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ಉಪನ್ಯಾಸಕರು ಕಾರ್ಯನಿರ್ವಹಿಸುತ್ತಿದ್ದಾರೆಯೇ, ಹಾಗಿಲ್ಲದಿದ್ದಲ್ಲಿ ಕಾರಣಗಳೇನು;

ಋ) ಹಾಲಿ ಖಾಲಿ ಇರುವ ಉಪನ್ಯಾಸಕರ ಹುದ್ದೆಗಳ ಸಂಖ್ಯೆ ಎಷ್ಟು;

ಎ) ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ಅರವಿಂದ ಲಿಂಬಾವಳಿ (ಉನ್ನತ ಶಿಕ್ಷಣ ಸಚಿವರು) :

ಅ) 5 1) ಕೋಲಾರ ಜಿಲ್ಲೆ–ಕೋಲಾರ, 2) ಹಾಸನ ಜಿಲ್ಲೆ–ಹಾಸನ, ಹೊಳೆನರಸೀಪುರ, ಪಡುವಲಹಿಪ್ಪೆ, 3) ರಾಮನಗರ ಜಿಲ್ಲೆ -ರಾಮನಗರ.